ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮತ್ತು ಆ) ಹೌದು ಸರ್ಕಾರದ ಪರಿಶೀಲನೆಯಲ್ಲಿದೆ

959 (974) ಶ್ರೀ ಶಿವಶಂಕರ್‌ರೆಡ್ಡಿ ಎನ್ ಎಚ್ (ಗೌರಿಬಿದನೂರು) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ರೈತರ ಕೃಷಿ ಸಾಲ ಮನ್ನಾ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರು ಆಶ್ವಾಸನೆ ನೀಡಿರುವುದು ನಿಜವಲ್ಲವೇ,

ಆ) ಹಾಗಿದ್ದಲ್ಲಿ, ರೈತರ ಕೃಷಿ ಸಾಲ ಮನ್ನಾ ಮಾಡಲು ಸರ್ಕಾರವು ಅನುಸರಿಸುವ ಮಾನದಂಡವೇನು, (ವಿವರ ಒದಗಿಸುವುದು)

ಇ) ಸಾಲ ಮನ್ನಾ ಮಾಡಲು ಸರ್ಕಾರವು ಜರೂರಾಗಿ ಕ್ರಮ ಕೈಗೊಳ್ಳುವುದೇ?

ಶ್ರೀ ಜಿ ಟಿ ದೇವೇಗೌಡ (ಸಹಕಾರ ಸಚಿವರು)

ಅ), ಆ) ಮತ್ತು ಇ) ಸಹಕಾರಿ ಸಂಸ್ಥೆಗಳು ರೈತರಿಗೆ ನೀಡಿರುವ ಕೃಷಿ ಸಾಲಗಳನ್ನು ಮನ್ನಾ ಮಾಡುವ ಪ್ರಸ್ತಾವವು ಸರ್ಕಾರದ ಪರಿಶೀಲನೆಯಲ್ಲಿ ಇರುತ್ತದೆ

960 (1018) ಶ್ರೀ ಶಿವಶಂಕರ್‌ರೆಡ್ಡಿ ಎನ್ ಹೆಚ್ (ಗೌರಿಬಿದನೂರು) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ಸ್ಥಳೀಯ ಸಂಸ್ಥೆಗಳ ಚುನಾವಣೆ ನಿಗದಿತ ಸಮಯದಲ್ಲಿ ನಡೆಸುವ ಉದ್ದೇಶ ಸರ್ಕಾರಕ್ಕಿದೆಯೇ,

ಆ) ಹಾಗಿದ್ದಲ್ಲಿ, ಇರುವ ತೊಡಕುಗಳು ಏನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು)

ಅ) ಸರ್ಕಾರವು ನಿಗದಿತ ಸಮಯದಲ್ಲಿ ಚುನಾವಣೆಯನ್ನು ನಡೆಸಲು ಉದ್ದೇಶಿಸಿದೆ ಆದರೆ, ಉಚ್ಚ ನ್ಯಾಯಾಲಯದ ಆದೇಶದನ್ವಯ 2001ರ ಜನಗಣತಿಯನ್ವಯ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡುಗಳ ಕ್ಷೇತ್ರಗಳ ಮರುವಿಂಗಡಣೆ ಹಾಗೂ ಮೀಸಲಾತಿಯಿಂದ ಚುನಾವಣೆ ನಡೆಸಲು ವಿಳಂಬವಾಗಿದೆ

ಆ) ಸರ್ಕಾರವು ಮೀಸಲಾತಿ ಬಗ್ಗೆ ಕರ್ನಾಟಕ ಮರನಭೆ ಕಾಯ್ದೆ 1964ರ ಕಲಂ 11 ಹಾಗೂ ಕರ್ನಾಟಕ ಮಹಾನಗರ ಪಾಲಿಕೆ ಕಾಯ್ದೆ 1976ರ ಕಲಂ 7ರನ್ವಯ ಮಾರ್ಗಸೂಚಿಯನ್ನು ಹೊರಡಿಸಿ ಅದರನ್ವಯ ಮೀಸಲಾತಿಯನ್ನು ನಿಗದಿಪಡಿಸಿ ಹೊರಡಿಸಿದ ಆದೇಶಕ್ಕೆ ಮಾನ್ಯ ರಾಜ್ಯ ಉಚ್ಚ